**ದಿನಾಂಕ: 21.08.2021 ರಂದು ಸಮಯ 10.30 ಗಂಟೆಗೆ ವಾರ್ಡ್ 154–ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ , ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ಬಾಲಕೃಷ್ಣ. ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–154.
5. ಶ್ರೀ.ಸದಾನಂದ, ಪೋಲೀಸ್ ಬಸವನಗುಡಿ ಸಂಚಾರಿ ಠಾಣೆ
6. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂಎಸ್.ಎಸ್.ಬಿ ವಾರ್ಡ್–154
7. ಶ್ರೀ. ಗೋಪಾಲಕೃಷ್ಣ, ಕಂದಾಯ ವಸೂಲಿಗಾರರು ವಾರ್ಡ್ 154
8. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154
9. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷರು, ವಾರ್ಡ್ 154

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನೋಡಲ್ ಅಧಿಕಾರಿಯವರು ಮಾತನಾಡಿ ಓ.ಎಫ್.ಸಿ. ಕಂಪನಿಯವರು ಅಲ್ಲಲ್ಲಿ ಪಿಟ್‌ಗಳನ್ನು ಹೊಡೆದಿದ್ದು ಇದನ್ನು ಡಾಂಬರೀಕರಣದಿಂದ ಮುಚ್ಚಲು ಕ್ರಮಕೈಗೊಳ್ಳುವುದು.

**ಕ್ರಮ: – ಸಹಾಯಕ ಅಭಿಯಂತರರು ವಾರ್ಡ್–154**
**ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.**

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ರಸ್ತೆಯಲ್ಲಿ ಸುಸಜ್ಜಿತವಾಗಿ ಗುಡಿಸಿ ವಾರ್ಡನ್ನು ಸ್ವಚ್ಛವಾಗಿ ಇಡಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: ಕಾರ್ಯಪಾಲಕ ಅಭಿಯಂತರರು (ಯೋಜನೆ–ದಕ್ಷಿಣ)**
**ರವರಿಗೆ ಶೀಘ್ರವಾಗಿ ಕ್ರಮ ವಹಿಸಲು ಕೋರಲಾಗಿರುತ್ತದೆ.**

>>>>2

ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿ ಬರುವ ಬೆಂಗಳೂರ್ ಒನ್ ಎದುರು ಇರುವ ಸ್ಕೈವಾಕ್ ಕೆಳಗಡೆ ಲಿಫ್ಟ ರೂಮ್ ಗಾಗಿ ನಿರ್ಮಿಸಿರುವ ಗುಂಡಿಯಲ್ಲಿ ನೀರು ನಿಂತಿರುವುದು ಗಮನಿಸಿದ್ದು ಇದನ್ನು ಖಾಲಿಮಾಡಲು ಕ್ರಮವಹಿಸಲು ತಿಳಿಸಿದರು.

**ಕ್ರಮ: – ಟ್ರಾಫಿಕ್ ಇಂಜಿನೀರಿಂಗ್ ಸೆಲ್ ರವರಿಗೆ ರವರಿಗೆ ಕ್ರಮಕೈಗೊಳ್ಳಲು ಸೂಚಿಸುವುದು..**

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್ಎಸ್‌ಬಿ ಇಲಾಖೆಯವರು ಅಗೆಯುತ್ತಿರುವುದನ್ನು ನಿಲ್ಲಿಸಿ ಬಿ.ಬಿ.ಎಂಪಿ.ಯಿಂದ ಅನುಮತಿ ಪಡೆದು ಕಾಮಗಾರಿಯನ್ನು ನಿರ್ವಹಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಎಂ.ಎನ್.ಕೆ ಪಾರ್ಕ್ ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.**

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರಿಗೆ ಎಬಿಸಿ ಕೇಬಲ್‌ಗಳನ್ನು ಹಾಕಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: –ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

AE154

21/8

**ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಸಂಖ್ಯೆ 154–ಬಸವನಗುಡಿ**

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.